ಡಾ.ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾನಿಲಯ

ಕುಲಪತಿ ಪ್ರೊ. ಬಿ.ರಮೇಶ್ ರವರಿಗೆ ಸ್ವದೇಶಿ ವಿಜ್ಞಾನ ಆಂದೋಲನ ಪ್ರಶಸ್ತಿ ಪ್ರದಾನ



ಚಾಮರಾಜನಗರ ವಿಶ್ವವಿದ್ಯಾನಿಲಯದಲ್ಲಿ ಏರ್ಪಟ್ಟಿರುವ 18ನೇ ಕನ್ನಡ ವಿಜ್ಞಾನ ಸಮ್ಮೇಳನದಲ್ಲಿ ಡಾ.ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ಕುಲಪತಿಗಳಾದ ಪ್ರೊ. ಬಿ. ರಮೇಶ್ ರವರಿಗೆ 2026ನೇ ಸಾಲಿನ ಭಾರತರತ್ನ ಪಂಡಿತ್ ಭೀಮಸೇನ ಜೋಶಿ ಸಾಂಸ್ಕೃತಿಕ ವಿಜ್ಞಾನ ಪುರಸ್ಕಾರ ನೀಡಿ ಗೌರವಿಸಲಾಗಿದೆ.

ಅಧ್ಯಯನ, ಅಧ್ಯಾಪನ, ಸಂಶೋಧನೆ ಮತ್ತು ಶೈಕ್ಷಣಿಕ ಆಡಳಿತ ಕ್ಷೇತ್ರದಲ್ಲಿ ಕಳೆದ 27 ವರ್ಷಗಳಿಂದ ಸೇವೆ ಸಲ್ಲಿಸುತ್ತಿರುವ ಪ್ರೊ. ಬಿ. ರಮೇಶ್ ರವರು ಸಮಾಜ ಕಾರ್ಯ ರಂಗದಲ್ಲಿ ನೀಡಿರುವ ಮಹತ್ವದ ಕೊಡುಗೆಗಾಗಿ ಸ್ವದೇಶಿ ವಿಜ್ಞಾನ ಆಂದೋಲನದ ವತಿಯಿಂದ ಈ ಪ್ರಶಸ್ತಿ ಪ್ರದಾನ ಮಾಡಲಾಗಿದೆ.

ರಾಜ್ಯದ ವಿವಿಧ ವಿಶ್ವವಿದ್ಯಾನಿಲಯಗಳ ಅನೇಕ ಆಡಳಿತಾತ್ಮಕ ಹುದ್ದೆಗಳಲ್ಲಿ ಪ್ರೊ. ರಮೇಶ್.ಬಿ. ಸಲ್ಲಿಸಿರುವ ಅತ್ಯುತ್ತಮ ಸೇವೆಯನ್ನು ಹಾಗೂ ಶೈಕ್ಷಣಿಕ ರಂಗದ ಪ್ರಗತಿಗೆ ಅವಿರತವಾಗಿ ನಡೆಸುತ್ತಿರುವ ಪರಿಶ್ರಮವನ್ನು ಪರಿಗಣಿಸಿ ಈ ಪುರಸ್ಕಾರವನ್ನು ನೀಡಲಾಗಿದೆ ಎಂದು ಪ್ರಶಸ್ತಿ ಪತ್ರದಲ್ಲಿ ಉಲ್ಲೇಖಿಸಲಾಗಿದೆ.

# ಸ್ವದೇಶಿ ವಿಜ್ಞಾನ ಆಂದೋಳನ- ಕರ್ನಾಟಕ

ಸ್ವದೇಶಿ ಸದನ, ಗುರು ನಾರಯಣ ವಿದ್ಯಾ ವಿಹಾರ, ಹೆಬ್ಬಾಳ, ಬೆಂಗಳೂರು-560 024

## ಭಾರತರತ್ನ ಪಂಡಿತ್ ಭೀಮ್‌ಸೇನ್ ಜೋಶಿ ಸಾಂಸ್ಕೃತಿಕ ವಿಜ್ಞಾನ ಪುರಸ್ಕಾರ 2026



**ಪ್ರೊ. ಬಿ.ರಮೇಶ್**

## ಸನ್ಮಾನ ಪತ್ರ

ಕರ್ನಾಟಕದ ಉನ್ನತ ಶಿಕ್ಷಣ ಹಾಗೂ ಸಮಾಜಕಾರ್ಯ ಕ್ಷೇತ್ರಗಳಲ್ಲಿ ವಿಶಿಷ್ಟ ಛಾಪನ್ನು ಮೂಡಿಸಿರುವ ಗಣ್ಯಶಿಕ್ಷಣತಜ್ಞರೂ, ಸಂಶೋಧಕರೂ, ಉತ್ತಮ ಆಡಳಿತಗಾರರೂ, ಡಾ. ಮನಮೋಹನ್‌ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ಕುಲಪತಿಗಳಾಗಿರುವ ಪ್ರೊ. ಬಿ.ರಮೇಶ್ ಅವರ ಅತ್ಯುತ್ತಮ ಸಾಧನೆಗಳನ್ನು ಗುರುತಸಿ ಸ್ವದೇಶಿ ವಿಜ್ಞಾನ ಆಂದೋಳನ- ಕರ್ನಾಟಕ, ಚಾಮರಜನಗರ ವಿಶ್ವವಿದ್ಯಾಲಯ, ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ, ಇವರ ಸಹಯೋಗದಲ್ಲಿ ಚಾಮರಜನಗರ ವಿಶ್ವವಿದ್ಯಾಲಯದಲ್ಲಿ ಮಾರ್ಚ್ 6-7 -2026ರಲ್ಲಿ ಆಯೋಜಿಸಲಾದ 18ನೇ ಕನ್ನಡ ವಿಜ್ಞಾನ ಸಮ್ಮೇಳನದಲ್ಲಿ ಭಾರತರತ್ನ ಪಂಡಿತ್ ಭೀಮ್‌ಸೇನ್ ಜೋಶಿ ಸಾಂಸ್ಕೃತಿಕ ವಿಜ್ಞಾನ ಪುರಸ್ಕಾರವನ್ನು ನೀಡುತ್ತಿರುವ ಈ ಶುಭದಿನದಂದು ಸಮರ್ಪಿಸಲಾದ ಸನ್ಮಾನ ಪತ್ರ

ಗೌರವಾನ್ವಿತರೇ

ಅಧ್ಯಯನ, ಅಧ್ಯಾಪನ, ಸಂಶೋಧನ ಮತ್ತು ಶೈಕ್ಷಣಿಕ ಆಡಳಿತ ಕ್ಷೇತ್ರಗಳಲ್ಲಿ ಸುಮಾರು ಇಪ್ಪತ್ತೇಳು ವರ್ಷಗಳಿಗಿಂತ ಹೆಚ್ಚಿನ ಅನುಭವ ಹೊಂದಿರುವ ತಾವು ಸಮಾಜಕಾರ್ಯ ಕ್ಷೇತ್ರದಲ್ಲಿ ಮಹತ್ವದ ಬೌದ್ಧಿಕ ಕೊಡುಗೆಗಳನ್ನು ನೀಡಿರುವಿರಿ. ಬೆಂಗಳೂರು ವಿಶ್ವವಿದ್ಯಾಲಯದಲ್ಲಿ ಸಮಾಜಕಾರ್ಯದಲ್ಲಿ ಪಿಎಚ್.ಡಿ ಪದವಿ ಪಡೆದ ತಾವು, ಬೆಂಗಳೂರು ವಿಶ್ವವಿದ್ಯಾಲಯ, ಕುವೆಂಪು ವಿಶ್ವವಿದ್ಯಾಲಯ ಹಾಗೂ ತುಮಕೂರು ವಿಶ್ವವಿದ್ಯಾಲಯಗಳಲ್ಲಿ ವಿವಿಧ ಹುದ್ದೆಗಳಲ್ಲಿ ಸೇವೆ ಸಲ್ಲಿಸಿ, ಶೈಕ್ಷಣಿಕ ಕ್ಷೇತ್ರದ ಬೆಳವಣಿಗೆಯಲ್ಲಿ ಪ್ರಮುಖ ಪಾತ್ರ ವಹಿಸಿರುವರಿ. ತಾವು ಶಿಕ್ಷಣ ಕ್ಷೇತ್ರದಲ್ಲಿ ಮಾತ್ರವಲ್ಲದೆ ಶೈಕ್ಷಣಿಕ ಆಡಳಿತದಲ್ಲಿಯೂ ವಿಶಿಷ್ಟ ಸಾಧನೆ ತೋರಿರುವಿರಿ. ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ, ಮೈಸೂರು ಹಾಗೂ ಬೆಂಗಳೂರು ಸಿಟಿ ವಿಶ್ವವಿದ್ಯಾಲಯಗಳಲ್ಲಿ ರಿಜಿಸ್ಟ್ರಾರ್, ರಿಜಿಸ್ಟ್ರಾರ್ (ಮೌಲ್ಯಮಾಪನ) ಮತ್ತು ಆಡಳಿತ ಹುದ್ದೆಗಳನ್ನು ಯಶಸ್ವಿಯಾಗಿ ನಿರ್ವಹಿಸಿ ವಿಶ್ವವಿದ್ಯಾಲಯ ಆಡಳಿತದ ಅಭಿವೃದ್ಧಿಗೆ ಮಹತ್ವದ ಕೊಡುಗೆ ನೀಡಿರುವಿರಿ. ತಮ್ಮ ಮಾರ್ಗದರ್ಶನದಲ್ಲಿ ಅನೇಕ ಸಂಶೋಧಕರು ಬೆಳೆದಿದ್ದು, ಹನ್ನೆರಡು ಪಿಎಚ್.ಡಿ ವಿದ್ಯಾರ್ಥಿಗಳು ಮತ್ತು ಎಂಟು ಎಂ.ಫಿಲ್ ವಿದ್ಯಾರ್ಥಿಗಳು ಪದವಿ ಪಡೆದಿದ್ದಾರೆ. ಅನೇಕ ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಸಮ್ಮೇಳನಗಳಲ್ಲಿ ಭಾಗವಹಿಸಿ ನೂರಕ್ಕೂ ಹೆಚ್ಚು ಸಂಶೋಧನಾ ಪ್ರಬಂಧಗಳನ್ನು ಮಂಡಿಸಿ, ನೂರಕ್ಕೂ ಹೆಚ್ಚು ಆಹ್ವಾನಿತ ಉಪನ್ಯಾಸಗಳನ್ನು ನೀಡಿರುವಿರಿ. ತಮ್ಮ ಸಂಶೋಧನೆಗಳು ಮುಖ್ಯವಾಗಿ ದಲಿತರು, ಅಲ್ಪಸಂಖ್ಯಾತರು ಮತ್ತು ಸಾಮಾಜಿಕವಾಗಿ ಹಿಂದುಳಿದ ವರ್ಗಗಳ ಸಾಮಾಜಿಕ-ಆರ್ಥಿಕ ಹಾಗೂ ಆರೋಗ್ಯ ಸಂಬಂಧಿತ ಸಮಸ್ಯೆಗಳ ಅಧ್ಯಯನ ಮತ್ತು ಪರಿಹಾರಗಳ ಮೇಲೆ ಕೇಂದ್ರೀಕೃತವಾಗಿವೆ. ಸಂಶೋಧನಾ ಕ್ಷೇತ್ರದಲ್ಲಿ ತಾವು ಆರು ಗ್ರಂಥಗಳನ್ನು ರಚಿಸಿದ್ದು, ಏಳು ಗ್ರಂಥಗಳಿಗೆ ಸಂಪಾದಕರಾಗಿದ್ದು, ಇಪ್ಪತ್ತು ಪುಸ್ತಕ ಅಧ್ಯಾಯಗಳನ್ನು ರಚಿಸಿರುವಿರಿ. ಅಲ್ಲದೆ ಅಂತರರಾಷ್ಟ್ರೀಯ ಹಾಗೂ ರಾಷ್ಟ್ರೀಯ ಜರ್ನಲ್‌ಗಳಲ್ಲಿ ನೂರಕ್ಕೂ ಹೆಚ್ಚು ಸಂಶೋಧನಾ ಲೇಖನಗಳನ್ನು ಪ್ರಕಟಿಸಿ, ಸಮಾಜಕಾರ್ಯ ಅಧ್ಯಯನಕ್ಕೆ ಮಹತ್ವದ ಕೊಡುಗೆ ನೀಡಿರವಿರಿ. ತಮ್ಮ ಈ ಸಾಧನೆಯನ್ನು ಗುರುತಿಸಿದ ಹಲವಾರು ಸಂಘಸಂಸ್ಥೆಗಳ ಸನ್ಮಾನ-ಪ್ರಶಸ್ತಿಗಳಿಗೆ ಪಾತ್ರರಾಗಿರುವಿರಿ. ಜಿಲ್ಲಾ ಕನ್ನಡ ರಾಜ್ಯೋತ್ಸವ ಪ್ರಶಸ್ತಿ (2017), ಆದರ್ಶ ವಿದ್ಯಾ ಸರಸ್ವತಿ ರಾಷ್ಟ್ರೀಯ ಪ್ರಶಸ್ತಿ, ಟೀಚಿಂಗ್ ಅಂಡ್ ರಿಸರ್ಚ್ ಎಕ್ಸಲೆನ್ಸ್ ಅವಾರ್ಡ್, ಸಾವಿತ್ರಿಬಾಯಿ ಫುಲೆ ಪ್ರಶಸ್ತಿ, ಕುದ್ಮುಲ್ ರಂಗರಾವ್ ಪ್ರಶಸ್ತಿ ಸೇರಿದಂತೆ ಅನೇಕ ಗೌರವಗಳು ತಮ್ಮದಾಗಿವೆ. ಸಮಾಜಕಾರ್ಯ ಶಿಕ್ಷಣದ ಅಭಿವೃದ್ಧಿ, ಹಿಂದುಳಿದ ಸಮುದಾಯಗಳ ಸಬಲೀಕರಣ ಮತ್ತು ಶೈಕ್ಷಣಿಕ ಆಡಳಿತದ ಶ್ರೇಯೋಭಿವೃದ್ಧಿಗೆ ತಮ್ಮ ಜೀವನವನ್ನು ಸಮರ್ಪಿಸಿರುವ ತಾವು ನಿಜಕ್ಕೂ ಸಮಾಜಮುಖಿ ಶಿಕ್ಷಣದ ದಾರಿದೀಪವಾಗಿರುವಿರಿ.

ತಮ್ಮ ಶೈಕ್ಷಣಿಕ ಸಾಧನೆಗಳು, ಸಂಶೋಧನಾ ಕೊಡುಗೆಗಳು ಹಾಗೂ ಸಮಾಜಮುಖಿ ಸೇವೆಯನ್ನು ಗುರುತಿಸಿ, 18ನೇ ಕನ್ನಡವಿಜ್ಞಾನ ಸಮ್ಮೇಳನದ ಈ ಶುಭ ಸಂದರ್ಭದಲ್ಲಿ ತಮ್ಮನ್ನು ಸನ್ಮಾನಿಸಿ ಗೌರವಿಸುವ ಸುಯೋಗ ಸ್ವದೇಶಿ ವಿಜ್ಞಾನ ಅಂದೋಳನ - ಕರ್ನಾಟಕ ಸಂಸ್ಥೆಯ ಪಾಲಿಗೆ ಬಂದಿರುವುದು ಅತ್ಯಂತ ಸಂತಸದ ವಿಷಯ. 2026ನೇ ಸಾಲಿನ ಭಾರತರತ್ನ ಪಂಡಿತ್ ಭೀಮ್‌ಸೇನ್ ಜೋಶಿ ಸಾಂಸ್ಕೃತಿಕ ವಿಜ್ಞಾನ ಪುರಸ್ಕಾರವನ್ನು ಪ್ರದಾನ ಮಾಡುವುದರ ಮೂಲಕ ಸ್ವದೇಶಿ ವಿಜ್ಞಾನ ಅಂದೋಳನ -ಕರ್ನಾಟಕ ಸಂಸ್ಥೆಯು ತಮ್ಮ ಮಹತ್ಸಾಧನೆಯನ್ನು ಗೌರವಿಸಿದ ಗೌರವಕ್ಕೆ ಪಾತ್ರವಾಗುತ್ತದೆ. ವಿಜ್ಞಾನ ಮತ್ತು ತಂತ್ರಜ್ಞಾನ ಕ್ಷೇತ್ರಕ್ಕೆ ತಮ್ಮ ಸೇವೆಯನ್ನು ಮುಂದುವರಿಸಲು ತಮಗೆ ಆ ಭಗವಂತನು ಹೆಚ್ಚಿನ ಆಯುರಾರೋಗ್ಯಗಳನ್ನು ನೀಡಲೆಂದು ಕೋರುತ್ತೇವೆ.

| | | |
|---|---|---|
| ಪ್ರಧಾನ ಕಾರ್ಯದರ್ಶಿ | ಆಧ್ಯಕ್ಷರು | Y. S. Gayathri<br>ಖಜಾಂಚಿ |
| ಸ್ವದೇಶಿ ವಿಜ್ಞಾನ ಆಂದೋಳನ -ಕರ್ನಾಟಕ | ಸ್ವದೇಶಿ ವಿಜ್ಞಾನ ಆಂದೋಳನ -ಕರ್ನಾಟಕ | ಸ್ವದೇಶಿ ವಿಜ್ಞಾನ ಆಂದೋಳನ -ಕರ್ನಾಟಕ |